# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 699 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ ಎಷ್ಟು: ಭರ್ತಿ ಮಾಡಿಕೊಳ್ಳಲಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು: | ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ:-5088 ಭರ್ತಿ ಮಾಡಿಕೊಳ್ಳಲಾದ ಸಂಖ್ಯೆ:-5088 ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ:866. |
| (ಆ) | ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೆರಿಸುವ ಕುರಿತು ಪ್ರಸ್ತಾವನೆಯು ಯಾವ ಹಂತದಲ್ಲಿದೆ (ಮಾಹಿತಿಯನ್ನು ಒದಗಿಸುವುದು) | 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ 6021 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಪೈಕಿ ಗ್ರೇಡ್-1 ಗ್ರಾಮ ಪಂಚಾಯತಿಗಳ 2194 ಹುದ್ದೆಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರೇಡ್ -1 ಹುದ್ದೆ ಎಂದು ರೂ.40,900–78,200 ವೇತನ ಶ್ರೇಣಿಯನ್ನು (ರೂ.21,600–40,050) pre-revised, as suggested by the Sixth Pay Commission ನೀಡಿ ಗ್ರೇಡ್-1 ಹುದ್ದೆಗೆ ಮೇಲ್ದರ್ಜೆಗೇರಿಸಲು ಆರ್ಥಿಕ ಇಲಾಖೆ ಸಹಮತಿ ಕೋರಲಾಗಿತ್ತು.<br><br>ಆರ್ಥಿಕ ಇಲಾಖೆಯು 6021 ಹುದ್ದೆಗಳ ಪೈಕಿ ವೇತನ ಶ್ರೇಣಿ ರೂ.40,900–78,200ರಲ್ಲಿ 1500 ಹುದ್ದೆಗಳನ್ನು ಅಂದರೆ ಈಗಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದ ಬಲದ 1/4 ರಷ್ಟು ಹುದ್ದೆಗಳನ್ನು ಉನ್ನತೀಕರಿಸಲು ಸಹಮತಿ ನೀಡಿದ್ದು, ಅದರಂತೆ ಸರ್ಕಾರದ ಆದೇಶ ಸಂಖ್ಯೆ: RDPR 29 GPS 2021, ದಿನಾಂಕ:09.11.2022 ರಲ್ಲಿ 1500 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಿ ಮರುಪದನಾಮೀಕರಿಸಿ ಆದೇಶ ಹೊರಡಿಸಲಾಗಿದೆ.<br><br>ಈಗಾಗಲೇ ಉನ್ನತೀಕರಿಸಿರುವ 1500 ಹುದ್ದೆಗಳನ್ನು ಹೊರತುಪಡಿಸಿ, 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಬಾಕಿ ಉಳಿದ 694 ಹುದ್ದೆಗಳನ್ನು ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಉನ್ನತೀಕರಿಸಲು ಕ್ರಮ ವಹಿಸಲಾಗುತ್ತಿದೆ.<br><br>ಗ್ರಾಮ ಪಂಚಾಯಿತಿಯ ಎಲ್ಲಾ ಹುದ್ದೆಗಳನ್ನು ಗ್ರೂಪ್-ಬಿ ದರ್ಜೆಗೆ ಉನ್ನತೀಕರಿಸುವ ಬಗ್ಗೆ ಅದರ ಸಾಧಕ ಬಾಧಕಗಳ ಬಗ್ಗೆ ಅಧ್ಯಯನ ಮಾಡಲು ಆದೇಶ ಸಂಖ್ಯೆ:ಕೆಪಿಆರ್ ಸಿ-ಜಿಪಿಎ/ಪಿಡಿಓ/322/2023, ದಿನಾಂಕ:29.10.2014ರಲ್ಲಿ ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ರವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಈ ಸಮಿತಿಯು ಮೂರು ತಿಂಗಳೊಳಗಾಗಿ ಪರಿಶೀಲಿಸಿ ವರದಿ ನೀಡಲು ಕಾಲಾವಕಾಶ ನೀಡಲಾಗಿರುತ್ತದೆ. |

<table>
<tr>
<td>(ಇ)</td>
<td>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೆರಿಸಿದರೆ ಸಿಗುವ ಸೌಲಭ್ಯಗಳಾವುವು(ವಿವರ ನೀಡುವುದು)</td>
<td>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಉನ್ನತೀಕರಿಸಿದರೆ ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ನಿಯಮ 42(ಬಿ) ಪ್ರಕಾರ ವೇತನ ಶ್ರೇಣಿಯನ್ನು ನಿಗಧಿಪಡಿಸಲಾಗುತ್ತದೆ. ವೇತನ ಶ್ರೇಣಿಗೆ ಅನುಗುಣವಾಗಿ ತುಟ್ಟಿ ಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯಲ್ಲಿ ಹೆಚ್ಚಳವಾಗುತ್ತದೆ.</td>
</tr>
<tr>
<td>ಈ)</td>
<td>ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು?</td>
<td>ಸರ್ಕಾರದ ಯೋಜನೆ/ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಸಂಬಂಧ ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮ ಜರುಗಿಸಲಾಗಿದೆ.<br><br>
1) ಖಾಲಿ ಇರುವ ಗ್ರಾಮ ಪಂಚಾಯಿತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ/ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರ ವಹಿಸಲು ನಿರ್ದೇಶನ ನೀಡಲಾಗಿದೆ.<br><br>
2) ಗ್ರಾಮ ಪಂಚಾಯತಿಗಳಲ್ಲಿ ಖಾಲಿಯಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಈ ಕೆಳಕಂಡ ನೇರ ನೇಮಕಾತಿ ಕೋಟಾದ ಹುದ್ದೆಗಳಿಗೆ ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br><br>
<table>
<tr><th>ಹುದ್ದೆ</th><th>ಕಲ್ಯಾಣ ಕರ್ನಾಟಕೇತರ ಹುದ್ದೆಗಳು</th><th>ಕಲ್ಯಾಣ ಕರ್ನಾಟಕದ ಹುದ್ದೆಗಳು</th><th>ಒಟ್ಟು</th></tr>
<tr><td>ಪಂಚಾಯತಿ ಅಭಿವೃದ್ಧಿ ಅಧಿಕಾರಿ</td><td>150</td><td>97</td><td>247</td></tr>
</table><br>
ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳಿಗೆ ದಿನಾಂಕ:16.11.2024 ಮತ್ತು 17.11.2024ರಂದು ಹಾಗೂ ಉಳಿಕೆ ಮೂಲ ವೃಂದದ 150 ಹುದ್ದೆಗಳಿಗೆ ದಿನಾಂಕ:07.12.2014 ಮತ್ತು 08.12.2024ರಂದು ಪರೀಕ್ಷೆ ನಡೆಸಲಾಗಿದ್ದು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>
3) ಕಾರ್ಯದರ್ಶಿ ಗ್ರೇಡ್-1 ಹುದ್ದೆಯಿಂದ ಮುಂಬಡ್ತಿ ಮೂಲಕ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ:01.10.2024ರಂದು ಕಾರ್ಯದರ್ಶಿ ಗ್ರೇಡ್-1 ವೃಂದದ ರಾಜ್ಯ ಮಟ್ಟದ ತಾತ್ಕಾಲಿಕ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದ್ದು, ಸ್ವೀಕೃತವಾಗಿರುವ ಆಕ್ಷೇಪಣೆಗಳು ಪರಿಶೀಲನಾ ಹಂತದಲ್ಲಿರುತ್ತದೆ. ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಿದ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು.</td>
</tr>
</table>

ಸಂಖ್ಯೆ: ಗ್ರಾಅಪ 674 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.